# MARCH 1,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

'ವಿಕಸಿತ ಭಾರತದ ಗುರಿಯೊಂದಿಗೆ, ವಿಜ್ಞಾನ ಮತ್ತು ನಾವಿನ್ಯತೆಯಲ್ಲಿ, ಜಾಗತಿಕ ನಾಯಕತ್ವಕ್ಕಾಗಿ, ಭಾರತೀಯ ಯುವಜನತೆ ಸಬಲೀಕರಣ', ಧ್ಯೇಯದೊಂದಿಗೆ ಈ ಬಾರಿಯ ರಾಷ್ಟ್ರೀಯ ವಿಜ್ಞಾನ ದಿನವನ್ನು ರಾಜ್ಯಾದ್ಯಂತ ಆಚರಿಸಲಾಯಿತು.

<><><>

ಬೆಂಗಳೂರಿನ ಜವಹರ್‌ಲಾಲ್ ನೆಹರು ತಾರಾಲಯದ ಆವರಣದಲ್ಲಿ, 42 ಕೋಟಿ ರೂಪಾಯಿ ವೆಚ್ಚದಲ್ಲಿ, ನೂತನವಾಗಿ ನಿರ್ಮಿಸಿದ, 'ಯು.ಆರ್ ರಾವ್ ಭವನ'ವನ್ನು, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಉದ್ಘಾಟಿಸಿದರು. ಸಕ್ಷಮ ನಗರಿ ಯೋಜನೆ ಅಡಿ, ಪರಿಸರ ಸ್ನೇಹಿ ಮಾದರಿಯ, ಹೊಸ ಕಟ್ಟಡವನ್ನು ನಿರ್ಮಿಸಲಾಗಿದೆ. ಜವಹರ್‌ಲಾಲ್ ನೆಹರು ತಾರಾಲಯ, ದೇಶದ ಪ್ರತಿಷ್ಠಿತ ಐದು ತಾರಾಲಯಗಳ ಪೈಕಿ ಒಂದಾಗಿದೆ.

<><><>

ಹಂಪಿ ಉತ್ಸವ–2025ರ ಅಂಗವಾಗಿ, ಹಂಪಿಯ ಮಾತಂಗ ಪರ್ವತ ಮೈದಾನದಲ್ಲಿ ವಿಜಯನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ತೋಟಗಾರಿಕೆ ಇಲಾಖೆ ವತಿಯಿಂದ ಆಯೋಜಿಸಲಾಗಿರುವ ಫಲಪುಷ್ಪ ಪ್ರದರ್ಶನಕ್ಕೆ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಚಾಲನೆ ನೀಡಿದರು. ಜನಾಕರ್ಷಣೆಯ ಫಲ ಪುಷ್ಪ ಪ್ರದರ್ಶನದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ ತೋಟಗಾರಿಕಾ ಇಲಾಖೆ ಉಪ ನಿರ್ದೇಶಕರಾದ ಚಿದಾನಂದಪ್ಪ ಅವರು.

<><><>

ಬೈಟ್: ಚಿದಾನಂದಪ್ಪ 33 ಸೆಕೆಂದುಗಳು

<><><>

ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕು, ಕುರೇಕುಪ್ಪ ಜಾನುವಾರು ಸಂವರ್ಧನೆ ಮತ್ತು ತರಬೇತಿ ಕೇಂದ್ರದ ಕೋಳಿ ಸಾಕಾಣಿಕೆ ಘಟಕದಲ್ಲಿ ಹಕ್ಕಿಜ್ವರ ಕಾಣಿಸಿಕೊಂಡ ಪರಿಣಾಮ ಎರಡು ಸಾವಿರ ಕೋಳಿಗಳು ಸತ್ತಿವೆ. ಘಟಕದಲ್ಲಿ ರೈತರಿಗೆ ವಿತರಿಸುವ ಉದ್ದೇಶದಿಂದ ಅಸೀಲ್ ತಳಿ ಕೋಳಿಗಳನ್ನು ಸಾಕಲಾಗಿತ್ತು.

ಹಕ್ಕಿ ಜ್ವರ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದ್ದು, ಕೇಂದ್ರದ ಸುತ್ತಲಿನ ಒಂದು ಕಿಲೋಮೀಟರ್ ವ್ಯಾಪ್ತಿಯನ್ನು ಸೋಂಕಿತ ಪ್ರದೇಶ ಎಂದು ಗುರುತಿಸಲಾಗಿದೆ. ರಾಜ್ಯಕ್ಕೆ ತಾಗಿಕೊಂಡಿರುವ ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳಲ್ಲಿ ಹಕ್ಕಿ ಜ್ವರ ಉಲ್ಬಣಗೊಂಡಿರುವ ಹಿನ್ನೆಲೆಯಲ್ಲಿ, ಗಡಿ ಪ್ರದೇಶದ ಮೂರು ಕಡೆಗಳಲ್ಲಿ ಚೆಕ್ ಪೋಸ್ಟ್ ಗಳನ್ನು ತೆರೆಯಲಾಗಿದ್ದು, ನಿಗಾ ವಹಿಸಲಾಗಿದೆ.

<><><>

ಚಿಕ್ಕಬಳ್ಳಾಪುರ ತಾಲೂಕಿನ ವರದಹಳ್ಳಿ ಗ್ರಾಮದಲ್ಲಿ, ಕೋಳಿಗಳಿಗೆ ಹಕ್ಕಿಜ್ವರ ಸೋಂಕು ದೃಢಪಟ್ಟಿದೆ. ಕೋಳಿಗಳನ್ನು ಗ್ರಾಮದಿಂದ ಹೊರ ಸಾಗಿಸುವುದು ಮತ್ತು ಬೇರೆಡೆಯಿಂದ ತರುವುದನ್ನು, ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ನಿರ್ಬಂಧಿಸಿದ್ದಾರೆ.

<><><>

ಕೋಳಿ ಜ್ವರದ ಹಿನ್ನೆಲೆ, ಮಾನ್ವಿ ಸೇರಿದಂತೆ, ರಾಯಚೂರು ಜಿಲ್ಲೆಯಲ್ಲಿ ಮುಂಜಾಗ್ರತಾ ಕ್ರಮ ಅನುಸರಿಸುವಂತೆ, ಜಿಲ್ಲಾ ಮಟ್ಟದ ಪ್ರಾಣಿ ಜನ್ಯ ರೋಗಗಳ ತುರ್ತು ನಿರ್ವಹಣಾ ಸಮಿತಿ ಅಧ್ಯಕ್ಷ ನಿತೀಶ್ ಕೆ. ಸಾರ್ವಜನಿಕರು ಹಾಗೂ ಕೋಳಿ ಸಾಕಾಣಿಕೆದಾರರಿಗೆ ಸೂಚಿಸಿದ್ದಾರೆ.

<><><>

ರಾಜ್ಯದಲ್ಲಿ ಬಾಣಂತಿ ಸಾವಿನ ಘಟನೆಗಳ ನಂತರ ಗುಣಮಟ್ಟದ ಔಷಧ ಖರೀದಿಗೆ ನಿರ್ಧರಿಸಲಾಗಿದ್ದು, ಇಲಾಖೆಯಿಂದಲೇ ಎರಡು ಜಿಲ್ಲೆಗೆ ಒಂದರಂತೆ ಔಷಧ ಗುಣಮಟ್ಟ ತಪಾಸಣೆ ಪ್ರಯೋಗಾಲಯ ಆರಂಭಿಸಲು ನಿರ್ಣಯಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಶರಣ ಪ್ರಕಾಶ ಪಾಟೀಲ ತಿಳಿಸಿದ್ದಾರೆ. ಕಾರವಾರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು.

<><><>

ಮನುಷ್ಯ ತಾನು ಬದಲಾದರೆ ಜಗತ್ತು ಬದಲಾಗುತ್ತದೆ, ಸರಳವಾಗಿ, ಪ್ರಾಮಾಣಿಕವಾಗಿ ಬದುಕುವುದರ ಜೊತೆ ಎಲ್ಲರನ್ನೂ ಪ್ರೀತಿಸುವ ಗುಣ ಹೊಂದಿರಬೇಕು ಎಂದು ಸಾಣೇಹಳ್ಳಿಯ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು. ಧಾರವಾಡದಲ್ಲಿ ಸರ್ವೋದಯ ಸಮುದಾಯ, ಗಾಂಧಿ ಶಾಂತಿ ಪ್ರತಿಷ್ಠಾನ ಕೇಂದ್ರದ ವತಿಯಿಂದ ಆಯೋಜಿಸಲಾದ 'ನಮ್ಮ ನಡಿಗೆ ಸರ್ವೋದಯದ ಕಡೆಗೆ' ಪಾದಯಾತ್ರೆ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪರಿಸರ, ಕೃಷಿ, ಶಿಕ್ಷಣ ಹಾಗೂ ಆಡಳಿತದಲ್ಲಿ ಸುಧಾರಣೆ ತರುವ ಆಶಯದಿಂದ ಧಾರವಾಡದಿಂದ ಗರಗದ ತನಕ ಪಾದಯಾತ್ರೆ ಜರುಗಿತು.

<><><>

ಬೀದರ್ ಜಿಲ್ಲೆಯ 867 ಜನವಸತಿ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಆಗದಂತೆ ಮುಂಜಾಗ್ರತಾ ಕ್ರಮ ವಹಿಸಿ, ನೀರು ಪೂರೈಕೆ ಮಾಡಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಧಿಕಾರಿಗಳಿಗೆ ನಿರ್ದೇಶಿಸಿದರು. ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಜರುಗಿದ ಕೆಡಿಪಿ ಸಭೆಯಲ್ಲಿ ಪಾಲ್ಗೊಂಡ ಅವರು ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿ 632 ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಮಾಹಿತಿ ಪಡೆದರು.

<><><>

ವಿಜಯನಗರ ಜಿಲ್ಲೆ, ಹಂಪಿ ಕನ್ನಡ ವಿಶ್ವವಿದ್ಯಾಲಯದ, ಹಸ್ತಪ್ರತಿಶಾಸ್ತ್ರ ವಿಭಾಗದ ವಿಶ್ರಾಂತ ಪ್ರಾಧ್ಯಾಪಕ, ಕೆ. ರವೀಂದ್ರನಾಥ ಅವರಿಗೆ, 'ಬಿ.ವ್ಹಿ. ಶಿರೂರ ಸಂಶೋಧನ ಪ್ರಶಸ್ತಿ'ಯನ್ನು, ಇಂದು ಧಾರವಾಡದಲ್ಲಿ ಪ್ರದಾನ ಮಾಡಲಾಗುತ್ತಿದೆ. ಕರ್ನಾಟಕ ವಿದ್ಯಾವರ್ಧಕ ಸಂಘದ, ಶ್ರೀ ರಾ. ಹ. ದೇಶಪಾಂಡೆ ಸಭಾಭವನದಲ್ಲಿ ಸಂಜೆ 6 ಗಂಟೆಗೆ, ಧಾರವಾಡದ ಎಂ. ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ವೀರಣ್ಣ ರಾಜೂರ, ಪ್ರಶಸ್ತಿ ನೀಡಿ, ಗೌರವಿಸಲಿದ್ದಾರೆ. ಪ್ರೊಫೆಸರ್ ಬಿ.ವಿ. ಶಿರೂರ ಪಾಲ್ಗೊಳ್ಳಲಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>